# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 120
ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 19.12.2022
ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮುಖ್ಯಮಂತ್ರಿ ಸಾಂತ್ವಾನ ಹರೀಶ್ ಯೋಜನೆಯು ಜಾರಿಯಲ್ಲಿದೆಯೇ; ಇದ್ದಲ್ಲಿ, ಸದರಿ ಯೋಜನೆಯನ್ನು ಯಾವಾಗ ಜಾರಿಗೊಳಿಸಲಾಗಿದೆ; ಇದರ ಉದ್ದೇಶವೇನು; | ಇಲ್ಲ.<br>ಪ್ರಸ್ತುತ, ರಾಜ್ಯ ಸರ್ಕಾರವು ಅಪಘಾತ ಸಂತ್ರಸ್ತರಿಗೆ ತುರ್ತು ವೈದ್ಯಕೀಯ ಚಿಕಿತ್ಸೆ ನೀಡುವ ಕುರಿತು ಆದೇಶ ಸಂಖ್ಯೆ: ಆಕುಕ 102 ಸಿಜಿಇ 2022 ದಿನಾಂಕ:08.04.2022 ರನ್ವಯ ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಯಡಿಯಲ್ಲಿ ಗುರುತಿಸಲಾದ 76 ಚಿಕಿತ್ಸಾ ವಿಧಾನಗಳಿಗೆ ಉಚಿತ ವೈದ್ಯಕೀಯ ಸೌಲಭ್ಯವನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮೂಲಕ ಜಾರಿಗೊಳಿಸಲಾಗಿದೆ. (ಆದೇಶದ ಪ್ರತಿಯನ್ನು ಅನುಬಂಧ-1 ರಲ್ಲಿರಿಸಿದೆ)<br><br>ಅಪಘಾತದ ಸಮಯದಿಂದ 48 ಗಂಟೆಗಳವರೆಗೆ ಗೋಲ್ಡನ್ ಅವರ್‌ನಲ್ಲಿ (ಅಪಘಾತದ ಸಮಯದಿಂದ 1 ಗಂಟೆ) ರಸ್ತೆ ಅಪಘಾತಗೊಳಗಾದ ಸಂತ್ರಸ್ತರಿಗೆ ತಕ್ಷಣ ಮತ್ತು ತ್ವರಿತ ವೈದ್ಯಕೀಯ ಬೆಂಬಲ ನಗದು ರಹಿತ ಚಿಕಿತ್ಸೆಯನ್ನು ಒದಗಿಸುವುದು ಯೋಜನೆಯ ಉದ್ದೇಶವಾಗಿದೆ. |
| ಆ) | ಯಾವ ಯಾವ ಜಿಲ್ಲೆಗಳಲ್ಲಿ ಈ ಯೋಜನೆಯಡಿ ಈವರೆಗೆ ಎಷ್ಟು ರೋಗಿಗಳಿಗೆ ಚಿಕಿತ್ಸೆ ನೀಡಲಾಗಿದೆ; (ಕಳೆದ 3 ವರ್ಷಗಳ ವಿವರ ನೀಡುವುದು) | ಅಪಘಾತ ಸಂತ್ರಸ್ತರಿಗೆ ತುರ್ತು ವೈದ್ಯಕೀಯ ಚಿಕಿತ್ಸೆ 12 ಜಿಲ್ಲೆಗಳಲ್ಲಿ ಈ ಯೋಜನೆಯಡಿ 38 ರೋಗಿಗಳಿಗೆ ಚಿಕಿತ್ಸೆಯನ್ನು ನೀಡಲಾಗಿದೆ. (ವಿವರ ಅನುಬಂಧ-2 ರಲ್ಲಿರಿಸಿದೆ). |
| ಇ) | ಇತ್ತೀಚೆಗೆ ಈ ಯೋಜನೆಯಡಿಯಲ್ಲಿ ಯಾವುದಾದರೂ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡದಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಂತಹ ಆಸ್ಪತ್ರೆಗಳೆಷ್ಟು; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು? | ಆದೇಶ ಜಾರಿಗೆ ಬಂದ ದಿನಾಂಕದಿಂದ ಅಪಘಾತ ಸಂತ್ರಸ್ತರಿಗೆ ತುರ್ತು ವೈದ್ಯಕೀಯ ಚಿಕಿತ್ಸೆ ನೀಡುವ ಕುರಿತಾಗಿ 2 ಪ್ರಕರಣಗಳು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ನಲ್ಲಿ ದಾಖಲಾಗಿದೆ.<br>1) ಆಶೀರ್ವಾದ ಆಸ್ಪತ್ರೆ, ಬಾಗಲಕೋಟೆ ಇಲ್ಲಿ ಚಿಕಿತ್ಸೆ ನಿರಾಕರಣೆಯ ಬಗ್ಗೆ ದಿ: 12.07.2022 ರಂದು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ನಲ್ಲಿ ದೂರು ದಾಖಲಾಗಿರುತ್ತದೆ. ಈ ಕುರಿತು ದಿ: 24.08.2022 ರಂದು ಆಸ್ಪತ್ರೆಗೆ ನೋಟೀಸ್ ನೀಡಿದ್ದು, ಆಸ್ಪತ್ರೆ ನೀಡಿರುವ ಸಮಜಾಯಿಷಿಯು ಸಮರ್ಪಕವಾಗಿಲ್ಲದ ಕಾರಣ ದಿ: 14.10.2022 ರಂದು ಪ್ರಕರಣವನ್ನು ಇತ್ಯರ್ಥಗೊಳಿಸಲು ಜಿಲ್ಲಾಧಿಕಾರಿಗಳ ನೇತೃತ್ವದ ಜಿಲ್ಲಾ ಕುಂದು ಕೊರತೆ ಪರಿಹಾರ ಸಮಿತಿ, ಬಾಗಲಕೋಟೆ ಇವರಿಗೆ ರವಾನಿಸಲಾಗಿರುತ್ತದೆ.<br>2) ಶ್ರೀ ಆಸ್ಪತ್ರೆ, ಬೀದರ್ ಇವರು ಯೋಜನೆಯಡಿ ಚಿಕಿತ್ಸೆ ನಿರಾಕರಿಸಿರುವ ಪ್ರಕರಣವು ದಿ: 21.11.2022 ರಂದು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ನಲ್ಲಿ ದಾಖಲಾಗಿದ್ದು, ಈ ಕುರಿತು ದಿ:03.12.2022 ರಂದು ಆಸ್ಪತ್ರೆಗೆ ಕಾರಣ ಕೇಳಿ ನೋಟೀಸ್ ನೀಡಲಾಗಿದ್ದು, ಪ್ರಕರಣವು ವಿಚಾರಣೆಯ ಹಂತದಲ್ಲಿರುತ್ತದೆ. |

**ಕಡತ ಸಂಖ್ಯೆ: ಆಕುಕ 153 ಎಸ್.ಬಿ.ವಿ. 2022**

(ಡಾ|| ಕೆ. ಸುಧಾಕರ್)
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು**

/244670/2022

ಅನುಬಂಧ-1

<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: 2022-23ನೇ ಸಾಲಿನ ಆಯವ್ಯಯದ ಭಾಷಣದ ಕಂಡಿಕೆ 118 ರಲ್ಲಿ ಘೋಷಿಸಿರುವ ಅಪಘಾತಕ್ಕೊಳಗಾದ ರೋಗಿಗಳಿಗೆ ಆಸ್ಪತ್ರೆಗೆ ದಾಖಲಾದ 48 ಗಂಟೆಗಳೊಳಗಾಗಿ 76 ಅವಶ್ಯ ಜೀವ ರಕ್ಷಕ ಆರೋಗ್ಯ ಸೇವೆಗಳನ್ನು ಒದಗಿಸುವ ಮಾರ್ಪಡಿತ ಮುಂದುವರೆದ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ

ಓದಲಾಗಿದೆ:
1. ಮಾನ್ಯ ಮುಖ್ಯಮಂತ್ರಿಯವರ 2022-23ನೇ ಆಯವ್ಯಯ ಭಾಷಣದ ಖಂಡಿಕೆ 118
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಏಕ ಕಡತ ಸಂಖ್ಯೆ:ಪಿ.ಎಲ್.ಎನ್(2)/12/10/2021-22

*****

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ 2022-23ನೇ ಸಾಲಿನ ಆಯವ್ಯಯ ಭಾಷಣದ ಖಂಡಿಕೆ 118 ರಲ್ಲಿ ಅಪಘಾತಕ್ಕೊಳಗಾದ ರೋಗಿಗಳಿಗೆ ಆಸ್ಪತ್ರೆಗೆ ದಾಖಲಾದ 48 ಗಂಟೆಗಳೊಳಗಾಗಿ 76 ಅವಶ್ಯ ಜೀವ ರಕ್ಷಕ ಆರೋಗ್ಯ ಸೇವೆಗಳನ್ನು ಒದಗಿಸುವ ಯೋಜನೆಯನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮೂಲಕ ಪ್ರಾರಂಭಿಸಲಾಗುವುದು ಎಂದು ಘೋಷಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ಆಯುಕ್ತರು, ಆಕುಕ ಸೇವೆಗಳು ಇವರಿಂದ ಸ್ವೀಕೃತವಾದ ಏಕ ಕಡತದಲ್ಲಿ ಅಪಘಾತಕ್ಕೊಳಗಾದ ರೋಗಿಗಳು ಆಸ್ಪತ್ರೆಗೆ ದಾಖಲಾದ 48 ಗಂಟೆಯೊಳಗೆ ಅವಶ್ಯ ಜೀವ ರಕ್ಷಕ ಆರೋಗ್ಯ ಸೇವೆಯ ಒದಗಿಸಲು ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕದ ಮಾರ್ಪಾಡಿತ ಮುಂದುವರೆದ ಯೋಜನೆಯಾಗಿದ್ದು, ಇದರಲ್ಲಿ 76 ಚಿಕಿತ್ಸಾ ವಿಧಾನಗಳನ್ನು ಗುರುತಿಸಲಾಗಿದೆ. ಬಿಪಿಎಲ್ ಹಾಗೂ ಎಪಿಎಲ್‌ನ ಫಲಾನುಭವಿಗಳಿಗೆ ನಗದು ರಹಿತ ಚಿಕಿತ್ಸೆ ಒದಗಿಸುವುದು ಯೋಜನೆಯ ಉದ್ದೇಶವಾಗಿರುತ್ತದೆ.

ಈ ಯೋಜನೆಯ ಅಡಿಯಲ್ಲಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳು (ಜಿಲ್ಲಾ, ತಾಲ್ಲೂಕು ಮಟ್ಟದ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರಗಳು), ರಾಜ್ಯದ ಎಲ್ಲಾ ಮೆಡಿಕಲ್ ಕಾಲೇಜ್ ಗಳು (ಖಾಸಗಿ ಮತ್ತೆ ಸಾರ್ವಜನಿಕ), ಟ್ರಸ್ಟ್ ನಡಿ ನೋಂದಾವಣೆಯಾದ ಎಲ್ಲಾ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಸೂಕ್ತ ಆದೇಶ ಹೊರಡಿಸುವಂತೆ ಕೋರಲಾಗಿದೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಆಕುಕ 102 ಸಿಜಿಇ 2022</u>
<u>ಬೆಂಗಳೂರು, ದಿನಾಂಕ: 08.04.2022</u>

ರಾಜ್ಯದಲ್ಲಿ ಅಪಘಾತಕ್ಕೊಳಗಾದ ಬಿಪಿಎಲ್ ಹಾಗೂ ಎಪಿಎಲ್ ರೋಗಿಗಳಿಗೆ ಆಸ್ಪತ್ರೆಗೆ ದಾಖಲಾದ 48 ಗಂಟೆಗಳೊಳಗಾಗಿ 76 ಅವಶ್ಯ ಜೀವ ರಕ್ಷಕ ಆರೋಗ್ಯ ಸೇವೆಗಳನ್ನು ಅನುಮೋದಿತ ಪ್ಯಾಕೇಜ್ ದರಗಳನ್ವಯ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರಡಿ ನಿಗದಿಪಡಿಸಿರುವ ಅನುದಾನದಲ್ಲಿ ಒದಗಿಸಲು ಅನುಮೋದನೆಯನ್ನು ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 300 ವೆಚ್ಚ-5/2022, ದಿನಾಂಕ:08.04..2022ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಯೋಜನಾ ಇಲಾಖೆಯ ಸಹಮತಿಯನ್ನು ನಿರೀಕ್ಷಿಸಿ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪದ್ಮ. ವಿ) 08/4/2022
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ಆರೋಗ್ಯ)

1&2)

:44670/2022

<u>ಇವರಿಗೆ:-</u>

1. ಪ್ರಧಾನ ಮಹಾಲೇಖಪಾಲರು (ಜಿ &ಎಸ್.ಎಸ್.ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು, (ಇ & ಆರ್.ಎಸ್.ಎ),ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು, (ಎ & ಇ),ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ 5329, ಬೆಂಗಳೂರು-560001.
4. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
5. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
6. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
7. ಹಿರಿಯ ನಿರ್ದೇಶಕರು ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಯೋಜನಾ ಇಲಾಖೆ (ಮಾನವ ಅಭಿವೃದ್ಧಿ ವಿಭಾಗ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 4&5) ವಿಧಾನಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

<u>ಪ್ರತಿ:</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ-2 ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.

ಅನುಬಂಧ-೨

| Accidents Victims Under ABARK Scheme_ Preauth approved as of 301th November 2022. | | | |
|---|---|---|---|
| PKG_CATEGORY | Patient District | Preauth Approved Cases | Preauth approved Amount |
| ACCIDENT VICTIMS | BANGALORE WEST | 1 | 15,000 |
| | BENGALURU | 6 | 1,80,500 |
| | CHAMARAJANAGARA | 1 | 42,000 |
| | CHIKKABALLAPURA | 2 | 30,000 |
| | DAKSHINA KANNADA | 13 | 3,74,000 |
| | DHARWAR | 1 | 8,500 |
| | KALABURAGI | 1 | 5,000 |
| | KOLAR | 1 | 15,000 |
| | MANDYA | 1 | 7,500 |
| | RAMANAGARA | 4 | 2,09,000 |
| | SHIVAMOGGA | 1 | 30,000 |
| | UTTARA KANNADA | 6 | 2,08,000 |
| Grand Total | | 38 | 11,24,500 |